**All India Radio: Bangalore**
**Regional Bulletin In Kannada**
**26.03.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಪಕ್ಷದ ಶಿಸ್ತು ಉಲ್ಲಂಘಿಸಿದ ಆರೋಪ : ಶಾಸಕ ಬಸನಗೌಡ ಪಾಟೀಲ ಯತ್ನಾಳ ಬಿಜೆಪಿಯಿಂದ ಉಚ್ಚಾಟನೆ
2. ಅರಣ್ಯ ಪ್ರದೇಶದಲ್ಲಿ ಸಮರ್ಪಕ ಭೂದಾಖಲೆಗಳೊಂದಿಗೆ ವಾಸಿಸುತ್ತಿರುವವರ ಒಕ್ಕಲೆಬ್ಬಿಸದಿರಿ- ಸಚಿವ ಎನ್.ಚೆಲುವರಾಯಸ್ವಾಮಿ
3. ಜಲ ಸಂರಕ್ಷಿತ ಗ್ರಾಮಗಳ ರೂಪಿಸಲು ಜಿಲ್ಲಾ ಮಟ್ಟದಲ್ಲಿ ನೀಲನಕ್ಷೆ ತಯಾರಿಸುವಂತೆ ಅಧಿಕಾರಿಗಳಿಗೆ ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ
4. ರಾಜ್ಯ ಸರ್ಕಾರದಿಂದ ಪರಿಶಿಷ್ಟರಿಗೆ ಮೀಸಲಿಟ್ಟ ೩೯ ಸಾವಿರ ಕೋಟಿ ರೂಪಾಯಿ ದುರುಪಯೋಗ - ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪ
5. ಮಡಿಕೇರಿಯಲ್ಲಿ ಇದೇ ೨೮ ರಿಂದ ಕೊಡವ ಕೌಟುಂಬಿಕ ಹಾಕಿ ಪಂದ್ಯಾವಳಿ

<><><><>

ಪಕ್ಷದ ಶಿಸ್ತು ಉಲ್ಲಂಘನೆ ಮಾಡಿದ ಆರೋಪದಲ್ಲಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಆರು ವರ್ಷಗಳ ಅವಧಿಗೆ ಬಿಜೆಪಿಯಿಂದ ಉಚ್ಚಾಟಿಸಲಾಗಿದೆ. ಈ ವಿಷಯವನ್ನು ಕೇಂದ್ರ ಶಿಸ್ತು ಸಮಿತಿ ಕಾರ್ಯದರ್ಶಿ ಓಂಪಾಠಕ್ ತಿಳಿಸಿದ್ದಾರೆ. ವಿಜಯಪುರ ಕ್ಷೇತ್ರದ ಶಾಸಕರಾಗಿ ಬಸನಗೌಡ ಪಾಟೀಲ್ ಯತ್ನಾಳ್ ಶಿಸ್ತು ಉಲ್ಲಂಘಿಸುತ್ತಿದ್ದಾರೆ ಎಂದು ದೂರು ನೀಡಲಾಗಿತ್ತು. ಈ ಸಂಬಂಧ ಅವರಿಗೆ ಇದೇ ವರ್ಷದ ಫೆಬ್ರುವರಿ ೧೦ರಂದು ಶೋಕಾಸ್ ನೋಟಿಸ್ ಜಾರಿ ಮಾಡಲಾಗಿತ್ತು. ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ ತಕ್ಷಣ ಜಾರಿಗೆ ಬರುವಂತೆ ೬ ವರ್ಷಗಳ ಅವಧಿಗೆ ಉಚ್ಚಾಟಿಸಲಾಗಿದೆ ಎಂದು ಆದೇಶ ಪ್ರತಿಯಲ್ಲಿ ತಿಳಿಸಲಾಗಿದೆ.

<><><><>

ಅರಣ್ಯ ಪ್ರದೇಶದಲ್ಲಿ ದಶಕಗಳ ಹಿಂದಿನಿಂದಲೂ ಸಮರ್ಪಕವಾದ ಭೂದಾಖಲೆಗಳೊಂದಿಗೆ ವಾಸಿಸುತ್ತಿರುವ ಜನರನ್ನು ಒಕ್ಕಲೆಬ್ಬಿಸುವ ಪ್ರಯತ್ನ ಮಾಡದಂತೆ ಅರಣ್ಯಾಧಿಕಾರಿಗಳಿಗೆ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚೆಲುವರಾಯಸ್ವಾಮಿ ಸೂಚಿಸಿದ್ದಾರೆ. ಮಂಡ್ಯ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿಂದು ನಡೆದ ಗಣಿ ಮತ್ತು ಅರಣ್ಯ ಇಲಾಖೆಗೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಆಯೋಜಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಈಗಾಗಲೇ ಸರ್ಕಾರದಿಂದಲೇ ಸ್ಥಳ ಗುರುತಿಸಿ, ಕೆಲವರಿಗೆ ಹಕ್ಕು ಪತ್ರಗಳನ್ನು ನೀಡಲಾಗಿದೆ. ಅಂತಹ ಸ್ಥಳಗಳನ್ನು ಕೈಬಿಟ್ಟು, ಉಳಿದ ಅರಣ್ಯ ಪ್ರದೇಶಗಳನ್ನು ಗುರುತಿಸಿ, ಸರ್ವೆ ನಡೆಸುವಂತೆ ಸಚಿವರು ನಿರ್ದೇಶನ ನೀಡಿದರು.

ಜಿಲ್ಲಾಧಿಕಾರಿ ಡಾ. ಕುಮಾರ ಮಾತನಾಡಿ, ಮದ್ದೂರಿನ ಶಿಂಷಾ ನದಿಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಅಕ್ರಮ ಮರಳು ಸಾಗಣೆ ನಡೆಯುತ್ತಿದೆ ಎಂದು ಮಾಹಿತಿ ಇದೆ. ಪ್ರಸ್ತುತ ೧೬ಕ್ಕೂ ಹೆಚ್ಚು ಮರಳು ದಂಧೆ ಪ್ರಕರಣಗಳು ದಾಖಲಾಗಿದ್ದು, ಕಾನೂನು ಕ್ರಮ ಜಾರಿಗೊಳಿಸಲಾಗಿದೆ. ಗಣಿ ಅಧಿಕಾರಿಗಳು ಹೆಚ್ಚಿನ ಮುತುವರ್ಜಿ ವಹಿಸಿ, ಆಕ್ರಮ ಮರಳು ಸಾಗಾಣಿಕೆ ತಡೆಗಟ್ಟಬೇಕು ಎಂದು ಸೂಚಿಸಿದರು.

<><><><>

ಜಲ ಸಂರಕ್ಷಿತ ಗ್ರಾಮಗಳನ್ನು ರೂಪಿಸಲು ಜಿಲ್ಲಾ ಮಟ್ಟದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ತಜ್ಞರ ಸಲಹೆ ಪಡೆದು, ನೀಲನಕ್ಷೆ ತಯಾರಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ್ ಖರ್ಗೆ, ಅಧಿಕಾರಿಗಳಿಗೆ ಸೂಚಿಸಿದ್ದಾರೆ. ೨೦೨೪-೨೫ರ ಆಯವ್ಯಯದಲ್ಲಿ ನೀರು ಸರಬರಾಜು

ಮೂಲಸೌಕರ್ಯಗಳ ಸುಸ್ಥಿರ ಮತ್ತು ವೈಜ್ಞಾನಿಕ ಮಾಹಿತಿ ವ್ಯವಸ್ಥೆ ಆಧಾರಿತ ಮೊಬೈಲ್ ಮತ್ತು ವೆಬ್ ತಂತ್ರಾಂಶವನ್ನು ಅಭಿವೃದ್ಧಿಪಡಿಸುವ ಕುರಿತು ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದ ಸಚಿವರು, ಗ್ರಾಮೀಣ ನೀರು ಸರಬರಾಜು ವ್ಯವಸ್ಥೆಯಲ್ಲಿ ಸುಧಾರಣೆಗಳಾಗಬೇಕೆಂದು ಮನದಟ್ಟು ಮಾಡಿದರು.

<><><><>

ರಾಜ್ಯದಲ್ಲಿ ಅಭಿವೃದ್ಧಿ ಸಂಪೂರ್ಣ ಶೂನ್ಯವಾಗಿದ್ದು, ಕಾನೂನು-ಸುವ್ಯವಸ್ಥೆ ಸಂಪೂರ್ಣ ಕುಸಿದಿದೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ದೂರಿದ್ದಾರೆ. ಬೆಂಗಳೂರಿನ ಬಿಜೆಪಿ ಕಾರ್ಯಾಲಯದಲ್ಲಿಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ಆಡಳಿತವು ಮಹಾನಗರ ಪಾಲಿಕೆಯಲ್ಲಿ ತ್ಯಾಜ್ಯ ದುಸ್ಥಿತಿ ಎಂತಿದೆ ಎಂದು ಟೀಕಿಸಿದರು. ಪರಿಶಿಷ್ಟ ಜಾತಿ, ಪಂಗಡದ ಅಭಿವೃದ್ಧಿಗೆ ಮೀಸಲಾಗಿಟ್ಟ ಎಸ್‌ಇಪಿ, ಟಿಎಸ್‌ಪಿ ಗೆ ಸಂಬಂಧಿಸಿದ ೩೯ ಸಾವಿರ ಕೋಟಿ ರೂಪಾಯಿಗಳನ್ನು ಕಾಂಗ್ರೆಸ್ ಸರ್ಕಾರ ದುರುಪಯೋಗ ಪಡಿಸಿಕೊಂಡಿದೆ. ಈ ಮೂಲಕ ದಲಿತರಿಗೆ ವಂಚನೆ ಮಾಡಿದೆ ಎಂದು ಛಲವಾದಿ ನಾರಾಯಣಸ್ವಾಮಿ ಆರೋಪಿಸಿದರು.

<><><><>

ಹಾಸನ ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸಂಚಾರ ದಟ್ಟಣೆಯನ್ನು ತಗ್ಗಿಸುವ ಉದ್ದೇಶದಿಂದ ಹಾಸನ ವರ್ತುಲ ರಸ್ತೆ ಯೋಜನೆಗೆ ಒಪ್ಪಿಗೆ ಪಡೆಯುವ ನಿಟ್ಟಿನಲ್ಲಿ ಮಾಜಿ ಪ್ರಧಾನಿ, ರಾಜ್ಯಸಭೆ ಸದಸ್ಯ ಎಚ್.ಡಿ.ದೇವೇಗೌಡ ಅವರು ಕೇಂದ್ರ ಹೆದ್ದಾರಿ ಮತ್ತು ಸಾರಿಗೆ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿಯಾಗಿ, ಮಾತುಕತೆ ನಡೆಸಿದರು. ನವದೆಹಲಿಯ ಸಂಸತ್ ಭವನದಲ್ಲಿಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರೊಂದಿಗೆ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿಯಾದ ದೇವೇಗೌಡರು, ಹಾಸನ ಬಹಳ ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ಹಾಗೂ ಕರಾವಳಿ ಮತ್ತು ಒಳನಾಡು ಪ್ರದೇಶಗಳಿಗೆ ಸಂಪರ್ಕ ಕಲ್ಪಿಸುವ ಪ್ರಮುಖ ಕೊಂಡಿಯಾಗಿದೆ. ಹೀಗಾಗಿ ಸಂಚಾರ ದಟ್ಟಣೆ ತಗ್ಗಿಸಲು, ವರ್ತುಲ ರಸ್ತೆ ನಿರ್ಮಾಣದ ಅಗತ್ಯವಿದೆ ಎಂದು ಹೇಳಿದರು.

<><><><>

ಮುಂಬೈನಲ್ಲಿ ಮೇ ೦೧ ರಿಂದ ೦೪ ರವರೆಗೆ ವಿಶ್ವ ಧ್ವನಿ ಶ್ರವಣ ಮತ್ತು ಮನರಂಜನಾ ಶೃಂಗಸಭೆ- ವೇವ್ಸ್ ೨೦೨೫ ನಡೆಯಲಿದೆ. ಇಂದಿನಿಂದ ಮಾಧ್ಯಮ ಪ್ರತಿನಿಧಿಗಳ ನೋಂದಣಿ ಆರಂಭವಾಗಿದೆ. ಕಾರ್ಯಕ್ರಮವನ್ನು ವರದಿ ಮಾಡಲು ಪತ್ರಕರ್ತರು, ಛಾಯಾಗ್ರಾಹಕರು, ವಿಷಯ ಸೃಜನಕಾರರು ಮತ್ತು ಮಾಧ್ಯಮ ವೃತ್ತಿಪರರನ್ನು ಆಹ್ವಾನಿಸಲಾಗಿದೆ. ಪತ್ರಿಕೋದ್ಯಮ, ಮಾಧ್ಯಮ ಅಥವಾ ಕಥೆ ಹೇಳುವಿಕೆಯ ಬಗ್ಗೆ ಆಸಕ್ತಿ ಹೊಂದಿದ್ದರೆ, ವರದಿಗಾರ, ಕ್ಯಾಮೆರಾಮನ್, ವಿಷಯ ಸೃಜನಕಾರ ಅಥವಾ ಸಾಮಾಜಿಕ ಮಾಧ್ಯಮ ವೃತ್ತಿಪರರು ನೋಂದಣಿ ಮಾಡಿಕೊಳ್ಳಬಹುದಾಗಿದೆ. ಅರ್ಜಿದಾರರು ಮಾನ್ಯತೆ ಪಡೆದ ವೇದಿಕೆಯಲ್ಲಿ ವರದಿಗಾರ, ಛಾಯಾಗ್ರಾಹಕ, ಕ್ಯಾಮೆರಾಮನ್ ಅಥವಾ ಡಿಜಿಟಲ್ ವಿಷಯ ರಚನೆಕಾರರಾಗಿರಬೇಕು. ಅರ್ಜಿ ಸಲ್ಲಿಸಲು ೨೦೨೫ರ ಏಪ್ರಿಲ್ ೧೫ ಕೊನೆಯ ದಿನವಾಗಿದೆ. ಅರ್ಜಿದಾರರು ನೋಂದಣಿ ಸಮಯದಲ್ಲಿ ಅಗತ್ಯವಿರುವ ಎಲ್ಲಾ ದಾಖಲೆಗಳನ್ನು ಅಪ್‌ಲೋಡ್ ಮಾಡಬೇಕು. ಅರ್ಜಿಯನ್ನು ಪರಿಶೀಲಿಸಿದ ನಂತರ ಮಾಧ್ಯಮ ಮಾನ್ಯತೆಯ ಅನುಮೋದನೆಯನ್ನು ಇ-ಮೇಲ್ ಮೂಲಕ ತಿಳಿಸಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ವೇವ್ಸ್ ಜಾಲತಾಣ https://app.wavesindia.org/register/media ಅವಲೋಕಿಸಬಹುದಾಗಿದೆ.

<><><><>

ಮಡಿಕೇರಿಯಲ್ಲಿ ಇದೇ ೨೮ ರಿಂದ ಒಂದು ತಿಂಗಳು ನಡೆಯಲಿರುವ ೨೫ನೇ ವರ್ಷದ ಕೊಡವ ಕೌಟುಂಬಿಕ ಹಾಕಿ ಪಂದ್ಯಾವಳಿಗೆ ಸಕಲ ಸಿದ್ಧತೆಗಳು ಕೈಗೊಳ್ಳಲಾಗಿದೆ ಎಂದು ಪಂದ್ಯಾವಳಿ ಆಯೋಜಕರಾದ ಮುದ್ದಂಡ ಕುಟುಂಬಸ್ಥರು ಮಾಹಿತಿ ನೀಡಿದ್ದಾರೆ. ಏಪ್ರಿಲ್ ೨೭ ರವರೆಗೆ ಮಡಿಕೇರಿಯ ೩ ಮೈದಾನಗಳಲ್ಲಿ ಪಂದ್ಯಗಳು ನಡೆಯಲಿದೆ. ಈ ಬಾರಿ ವಿಶೇಷವಾಗಿ ಮಹಿಳಾ ತಂಡಗಳಿಂದಲೂ ಹಾಕಿ ಪಂದ್ಯಗಳು ನಡೆಯಲಿದ್ದು, ೩೦ ಮಹಿಳಾ ತಂಡಗಳು ಈಗಾಗಲೇ ಹೆಸರು ನೋಂದಾಯಿಸಿವೆ ಎಂದು ತಿಳಿಸಿದರು. ೨೫ ಸಾವಿರ ಆಸನಗಳ

ಗ್ಯಾಲರಿ ನಿರ್ಮಾಣವಾಗಿದ್ದು, ೩ ಸಾವಿರ ವಾಹನಗಳ ನಿಲುಗಡೆಗೆ ವ್ಯವಸ್ಥೆ ಕಲ್ಪಿಸಲಾಗಿದೆ. ಪ್ರೇಕ್ಷಕರಿಗೆ ಆಹಾರ ವ್ಯವಸ್ಥೆಗಾಗಿ ೩೦ ಮಳಿಗೆಗಳನ್ನು ತೆರೆಯಲಾಗುತ್ತದೆ ಎಂದು ಅವರು ಮಾಹಿತಿ ನೀಡಿದರು.

<><><><>

ಗ್ರಾಮೀಣ ನೈರ್ಮಲ್ಯ ಕಾಪಾಡಿ, ಕಸ ನಿರ್ವಹಣೆಗೆ ಹೆಚ್ಚಿನ ಆದ್ಯತೆ ನೀಡುತ್ತಿರುವ 'ಸ್ವಚ್ಛ ವಾಹಿನಿ' ವಾಹನಗಳ ಮಹಿಳಾ ಚಾಲಕಿಯರು, ಇಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಭೇಟಿಯಾದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಪ್ರಿಯಾಂಕ್ ಖರ್ಗೆ, ಗ್ರಾಮೀಣ ಮಹಿಳೆಯರಲ್ಲಿ ಆತ್ಮವಿಶ್ವಾಸ ತುಂಬಿ, ಸ್ವಾವಲಂಭಿಗಳನ್ನಾಗಿಸುವ ನಿಟ್ಟಿನಲ್ಲಿ ಕಸ ಸಂಗ್ರಹಣೆ ನಿರ್ವಹಣೆಯಲ್ಲಿ ಮಹಿಳೆಯರಿಗೆ ಮುಂದಾಳತ್ವ ವಹಿಸಲಾಗಿದೆ. ಸ್ವಚ್ಛ ವಾಹಿನಿ ವಾಹನಗಳಿಗೆ ಮಹಿಳೆಯರನ್ನೇ ಚಾಲಕರನ್ನಾಗಿ ಆಯ್ಕೆ ಮಾಡಲಾಗಿದೆ ಎಂದು ಹೇಳಿದರು. ಅವರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಹಾಗೂ ಕಾರ್ಯನಿರ್ವಹಿಸಲು ಉತ್ತಮ ವಾತಾವರಣ ನಿರ್ಮಿಸಿಕೊಡುವ ನಿಟ್ಟಿನಲ್ಲಿ ಒಂದು ವಾರದೊಳಗಾಗಿ ಅಧಿಕಾರಿಗಳ ಸಭೆ ಕರೆದು ಚರ್ಚಿಸುವುದಾಗಿ ಸಚಿವರು ಭರವಸೆ ನೀಡಿದರು.

<><><><>

ಹಣ ನೀಡಿದರೆ ಅಥವಾ ಸಾಮಾಜಿಕ ಜಾಲತಾಣದಲ್ಲಿ ನಿರ್ದಿಷ್ಟ ಪೇಜ್ ಅನುಸರಿಸಿದರೆ, ಎಸ್‌ಎಸ್‌ಎಲ್‌ಸಿ ಪ್ರಶ್ನೆಪತ್ರಿಕೆ ನೀಡುವುದಾಗಿ ನಕಲಿ ಪೋಸ್ಟ್ ಮಾಡಿದ್ದ, ೫ ಜಾಲತಾಣಗಳ ವಿರುದ್ಧ ಹುಬ್ಬಳ್ಳಿಯ ಕಮರಿಪೇಟ್ ಪೊಲೀಸ್ ಠಾಣೆಯಲ್ಲಿ ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿ, ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಈ ಕುರಿತು ಮಾಹಿತಿ ನೀಡಿದ ಪೊಲೀಸ್ ಆಯುಕ್ತ ಎನ್.ಶಶಿಕುಮಾರ್, ವಿದ್ಯಾರ್ಥಿಗಳು, ಪೋಷಕರು ಸಾಮಾಜಿಕ ಜಾಲತಾಣದ ಇಂತಹ ಜಾಲತಾಣಗಳ ಪೋಸ್ಟ್‌ಗಳನ್ನು ನಂಬದಿರುವಂತೆ ಮನವಿ ಮಾಡಿದ್ದಾರೆ.

ಧ್ವನಿ: ಎನ್.ಶಶಿಕುಮಾರ್, ಪೊಲೀಸ್ ಆಯುಕ್ತ

<><><><>

ವಿದ್ಯಾರ್ಥಿಗಳ ವ್ಯಕ್ತಿತ್ವ ನಿರ್ಮಾಣ ಹಾಗೂ ರಾಷ್ಟ್ರೀಯ ಭಾವೈಕ್ಯತೆ ಜಾಗೃತಿ ಕಾರ್ಯದಲ್ಲಿ ಎನ್‌ಎಸ್‌ಎಸ್ ಕೊಡುಗೆ ಅತ್ಯಂತ ಮಹತ್ವಪೂರ್ಣವಾಗಿದೆ ಎಂದು ಬೆಂಗಳೂರು ನಗರ ವಿಶ್ವವಿದ್ಯಾಲಯದ ಕುಲಪತಿ ಪ್ರೊಫೆಸರ್ ಲಿಂಗರಾಜ ಗಾಂಧಿ ಪ್ರತಿಪಾದಿಸಿದರು. ಬೆಂಗಳೂರಿನ ಸೆಂಟ್ರಲ್ ಕಾಲೇಜ್ ಆವರಣದಲ್ಲಿರುವ ಜ್ಞಾನಜ್ಯೋತಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ವಿಶ್ವವಿದ್ಯಾನಿಲಯ ಮಟ್ಟದ ಎನ್‌ಎಸ್‌ಎಸ್ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>